# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : | 378(530) |
| ಸದಸ್ಯರ ಹೆಸರು : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ: | 19.07.2024 |
| ಉತ್ತರಿಸುವವರು: | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರುವ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯುಯಲ್ ಸಮೀಕ್ಷೆ ತ್ವರಿತವಾಗಿ ಮಾಡಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲು ಆದೇಶಿಸಲಾಗಿದೆಯೇ; | ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆ ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/64/ಇ-ಆಡಳಿತ/2022, ದಿನಾಂಕ:08.08.2022ರಂದು ಆದೇಶಿಸಲಾಗಿದೆ. **(ಪ್ರತಿ ಲಗತ್ತಿಸಿದೆ)** |
| (ಆ) | ಸದರಿ ಆದೇಶದ ನಂತರ ಬೆಂಗಳೂರು ನಗರ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲಾದ ಆಸ್ತಿಗಳ ಸಂಖ್ಯೆ ಎಷ್ಟು; | ಒಟ್ಟು 7,66,587 ಆಸ್ತಿಗಳ ಪೈಕಿ, 7,08,048 ಆಸ್ತಿಗಳಿಗೆ ಮ್ಯಾನ್ಯೂಯಲ್ ಸಮೀಕ್ಷೆ ಮಾಡಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲಾಗಿದೆ. **ತಾಲ್ಲೂಕುವಾರು ವರದಿಯನ್ನು ಲಗತ್ತಿಸಿದೆ.** |
| (ಇ) | ಬೆಂಗಳೂರು ನಗರ ಜಿಲ್ಲೆಯ ಹಲವು ಗ್ರಾಮ ಪಂಚಾಯತಿಗಳು ಹಸಿರು ಪಟ್ಟಿ ವಲಯದ ಕಾರಣ ನೀಡಿ ಹಲವು ವರ್ಷಗಳ ಹಿಂದೆ ಕಟ್ಟಡ/ನಿವೇಶನ ನಿರ್ಮಿಸಿದ ಸರ್ಕಾರದ ಬೀದಿ ದೀಪ, ರಸ್ತೆ, ಕುಡಿಯುವ ನೀರು ಇನ್ನಿತರ ಎಲ್ಲಾ ಸೌಲಭ್ಯ ಪಡೆಯುತ್ತಿದ್ದರೂ, ಪಂಚತಂತ್ರ ತೆರಿಗೆ ನಿರ್ಧರಣಾ ಪಟ್ಟಿಯಲ್ಲಿ ಸೇರ್ಪಡೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸದರಿ ನಿವೇಶನ/ಕಟ್ಟಡಗಳನ್ನು ತೆರಿಗೆ ನಿರ್ಧರಣೆ ವ್ಯಾಪ್ತಿಗೆ ಸೇರ್ಪಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | ಬಂದಿದೆ.<br><br>ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆ ನಡೆಸಲು ನಿರ್ದೇಶನ ನೀಡಲಾಗಿದೆ ಹಾಗೂ ಸದರಿ ಬಿಟ್ಟುಹೋದ ಆಸ್ತಿಗಳನ್ನು ಸೇರ್ಪಡೆ ಮಾಡಲು ಇ-ಸ್ವತ್ತು ತಂತ್ರಾಂಶದಲ್ಲಿ ಅವಕಾಶ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ/98/ಇ-ಆಡಳಿತ/2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್
ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ ಸಚಿವರು.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆ ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ ಮಾರ್ಗಸೂಚಿಗಳು

ಓದಲಾಗಿದೆ:- 1) 2019-20ನೇ ಸಾಲಿನ ರಾಜ್ಯ ಸರ್ಕಾರದ ಆಯವ್ಯಯ ಘೋಷಣೆ

2) ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 457 ಗ್ರಾಪಂಅ 2019 ದಿನಾಂಕ:06.08.2019

3) ದಿನಾಂಕ:17.05.2022ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ರಾಜ್ಯ ಸರ್ಕಾರದ ಆಯವ್ಯಯ ಘೋಷಣೆ ಕಂಡಿಕೆ: 222ರಲ್ಲಿ ರಾಜ್ಯದ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿನ ಎಲ್ಲಾ ಆಸ್ತಿಗಳ ತೆರಿಗೆ ವ್ಯಾಪ್ತಿಯನ್ನು ವಿಸ್ತರಿಸಲು ಉದ್ದೇಶಿಸಲಾಗಿರುತ್ತದೆ. ಈ ಕಾರ್ಯಕ್ರಮವನ್ನು ಓದಲಾದ (2)ರ ಸರ್ಕಾರದ ಆದೇಶದಲ್ಲಿ ಪ್ರಾಯೋಗಿಕವಾಗಿ ಬೆಂಗಳೂರು ನಗರ ಜಿಲ್ಲೆಯಲ್ಲಿನ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಸ್ತಿಗಳನ್ನು ಡಿಜಿಟಲೀಕರಣದ ಮೂಲಕ ಹಾಗೂ ತುಮಕೂರು ಜಿಲ್ಲೆಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಸ್ತಿಗಳ ಸಂಪೂರ್ಣ ಮಾಹಿತಿಯನ್ನು ಮ್ಯಾನ್ಯೂಯಲ್ ಸಮೀಕ್ಷೆ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ. ಅದರಂತೆ, ಈಗಾಗಲೇ ತುಮಕೂರು ಜಿಲ್ಲೆಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆಯ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ತೆರಿಗೆ ವ್ಯಾಪ್ತಿಯಿಂದ ಹೊರಗೆ ಉಳಿದ ಎಲ್ಲಾ ಆಸ್ತಿಗಳನ್ನು ತೆರಿಗೆ ವ್ಯಾಪ್ತಿಗೆ ಒಳಪಡಿಸಲಾಗಿರುತ್ತದೆ. ಓದಲಾದ (3)ರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರವಾಗಿ ಚರ್ಚಿಸಿ, ತುಮಕೂರು ಜಿಲ್ಲೆಯ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಿದ ಮಾದರಿಯಲ್ಲಿ ರಾಜ್ಯದ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆ ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲು ತೀರ್ಮಾನಿಸಲಾಗಿದೆ.

ಅದರಂತೆ, ಈ ಕೆಳಕಂಡ ಆದೇಶ,

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/64/ಇ-ಆಡಳಿತ/2022, ಬೆಂಗಳೂರು, ದಿನಾಂಕ: 08.08.2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆ ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸಲು ತೀರ್ಮಾನಿಸಲಾಗಿದ್ದು, ಮ್ಯಾನ್ಯೂಯಲ್ ಸಮೀಕ್ಷೆ ಕೈಗೊಳ್ಳುವ ಬಗ್ಗೆ ವಿವರವಾದ ಮಾರ್ಗಸೂಚಿಗಳನ್ನು ಈ ಕೆಳಕಂಡಂತೆ ಸರ್ಕಾರವು ಹೊರಡಿಸಿದೆ.

**ಉದ್ದೇಶಗಳು:**

1) ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಆಸ್ತಿಗಳ ಕ್ಷೇತ್ರ ಸಮೀಕ್ಷೆ ನಡೆಸಿ ನಿಗಧಿತ ನಮೂನೆಯಲ್ಲಿ ವಿವರಗಳನ್ನು ನಿಖರವಾಗಿ ಸಂಗ್ರಹಿಸುವುದು.
2) ಸಂಗ್ರಹಿಸಲಾದ ಆಸ್ತಿ ವಿವರಗಳ ಆಧಾರದಲ್ಲಿ ವೈಜ್ಞಾನಿಕವಾಗಿ ತೆರಿಗೆ ನಿರ್ಧರಣೆ ಮಾಡುವುದು.
3) ಆಸ್ತಿಯ ವಿವರ ಹಾಗೂ ತೆರಿಗೆ ನಿರ್ಧರಣೆಯನ್ನು ಇಲಾಖೆಯ ಪಂಚತಂತ್ರ 2.0 ತಂತ್ರಾಂಶದಲ್ಲಿ ದಾಖಲಿಸುವುದು.
4) ಪಂಚತಂತ್ರ 2.0 ತಂತ್ರಾಂಶದಲ್ಲಿ ಆಸ್ತಿಯ ಮಾಲೀಕರು ಪಾರದರ್ಶಕವಾಗಿ, ಸ್ವಯಂಚಾಲಿತ ತೆರಿಗೆ ಲೆಕ್ಕಾಚಾರದ ಮೂಲಕ ತೆರಿಗೆ ಪಾವತಿಸಲು ಕ್ರಮವಹಿಸುವುದು.
5) ಪಂಚತಂತ್ರ 2.0 ತಂತ್ರಾಂಶದಲ್ಲಿ ಇ-ಸ್ವತ್ತು ತಂತ್ರಾಂಶವನ್ನು ಸೇರ್ಪಡೆಗೊಳಿಸಿ, ಆಸ್ತಿ ಮಾಲೀಕರಿಗೆ ಸರಳವಾಗಿ ಆಸ್ತಿ ದಾಖಲೆಗಳನ್ನು ನೀಡಲು ಕ್ರಮ ಕೈಗೊಳ್ಳುವುದು.

**ಮ್ಯಾನ್ಯೂಯಲ್ ಸಮೀಕ್ಷೆ:**

- ಮನೆ-ಮನೆ ಭೇಟಿ ಮಾಡಿ ಕ್ಷೇತ್ರ ಸಮೀಕ್ಷೆ ನಡೆಸುವುದು.
- ಕೆ.ಐ.ಎ.ಡಿ.ಬಿ./ಕೆ.ಎಸ್.ಎಸ್.ಐ.ಡಿ.ಸಿ. ಕೈಗಾರಿಕಾ ಪ್ರದೇಶಗಳಲ್ಲಿ ಸಂಬಂಧಿಸಿದ ಸಂಸ್ಥೆಗಳ ಅಧಿಕಾರಿಗಳೊಂದಿಗೆ ಜಂಟಿ ಸಮೀಕ್ಷೆ ನಡೆಸುವುದು.
- ಸರ್ಕಾರವು ಅನುಮೋದಿಸಿದ ನಿಗಧಿತ ಆಸ್ತಿ ಮತ್ತು ಆಸ್ತಿ ತೆರಿಗೆ ನಮೂನೆಯಲ್ಲಿ ಆಸ್ತಿಯ ಮಾಲೀಕರ ವಿವರ, ಆಸ್ತಿಯ ವಿವರಗಳನ್ನು ನಿಖರವಾಗಿ ದಾಖಲಿಸುವುದು.
- ಗ್ರಾಮ ಠಾಣಾ, ಭೂ ಪರಿವರ್ತಿತ ಜಮೀನು, ವಿನ್ಯಾಸ ನಕ್ಷೆ ಅನುಮೋದಿತ ಬಡಾವಣೆ, ಸರ್ಕಾರದ ವಸತಿ ಯೋಜನೆ, ಸಾರ್ವಜನಿಕ ಆಸ್ತಿಗಳನ್ನು ದಾಖಲಿಸುವುದು.
- ವಸತಿ, ವಾಣಿಜ್ಯ, ವಸತಿಯೇತರ, ಕೈಗಾರಿಕೆ, ಕೃಷಿ ಆಧಾರಿತ ಉತ್ಪಾದನಾ ಘಟಕಗಳ ಆಸ್ತಿಗಳ ವಿವರಗಳನ್ನು ದಾಖಲಿಸುವುದು.
- ಆಸ್ತಿಗೆ ಸಂಬಂಧಿಸಿದ ದಾಖಲೆಯ ಪ್ರತಿಗಳನ್ನು ಸಂಗ್ರಹಿಸುವುದು.
- ಆಸ್ತಿಯ ವಿವರಗಳಿಗನುಗುಣವಾಗಿ ನಿಗಧಿತ ನಮೂನೆಯಲ್ಲಿ ತೆರಿಗೆ ನಿರ್ಧರಣೆಯ ವಿವರಗಳನ್ನು ದಾಖಲಿಸುವುದು.
- ಆಸ್ತಿಯ ಮಾಲೀಕರ ಸಮ್ಮುಖದಲ್ಲಿ ನಿಗಧಿತ ನಮೂನೆಯಲ್ಲಿ ಆಸ್ತಿ ವಿವರ ಮತ್ತು ತೆರಿಗೆ ನಿರ್ಧರಣೆಯನ್ನು ದೃಢೀಕರಿಸುವುದು.
- ನಿಗಧಿತ ನಮೂನೆಯಲ್ಲಿನ ಆಸ್ತಿ ವಿವರಗಳನ್ನು ನಮೂನೆ-9ಎ ರಿಜಿಸ್ಟರ್‌ನಲ್ಲಿ ದಾಖಲಿಸುವುದು.
- ನಮೂನೆ-9ಎ ಆಧಾರದ ಮೇಲೆ ಕ್ರಮಬದ್ಧ ಆಸ್ತಿಗಳ ವಿವರಗಳನ್ನು ನಮೂನೆ-9 ಮತ್ತು ನಮೂನೆ-11ಎ ರಿಜಿಸ್ಟರ್‌ಗಳಲ್ಲಿ ಹಾಗೂ ಕ್ರಮಬದ್ಧವಲ್ಲದ ಆಸ್ತಿಗಳನ್ನು ನಮೂನೆ-11ಬಿ ರಿಜಿಸ್ಟರ್‌ನಲ್ಲಿ ದಾಖಲಿಸುವುದು.
- ಗ್ರಾಮ ಪಂಚಾಯಿತಿಯಲ್ಲಿ ಸಮೀಕ್ಷೆಯ ಆಸ್ತಿ ಮತ್ತು ಆಸ್ತಿ ತೆರಿಗೆ ನಮೂನೆ ಮತ್ತು ಆಸ್ತಿಗೆ ಸಂಬಂಧಿಸಿದ ದಾಖಲೆಗಳ ಪ್ರತ್ಯೇಕ ಕಡತಗಳನ್ನು ನಿರ್ವಹಿಸುವುದು.

**ಕಾರ್ಯಕ್ರಮದ ಅನುಷ್ಠಾನ:**

- ಗ್ರಾಮ ಪಂಚಾಯಿತಿಗಳಲ್ಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಡಾಟಾ ಎಂಟ್ರಿ ಆಪರೇಟರ್ ಮತ್ತು ಕರ ವಸೂಲಿಗಾರರ ನೇತೃತ್ವದಲ್ಲಿ ನೀರು ವಿತರಕರು, ಹೊರಗುತ್ತಿಗೆ ಸಂಸ್ಥೆಯಿಂದ ಪಡೆದ ಸಿಬ್ಬಂದಿಗಳನ್ನು ಒಳಗೊಂಡ ಸಮೀಕ್ಷಾ ತಂಡಗಳನ್ನು ರಚಿಸಿ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳುವುದು.

- ಸರ್ಕಾರದ ಯೋಜನೆಯಡಿ ನೋಂದಾಯಿಸಲ್ಪಟ್ಟ ಸ್ವಸಹಾಯ ಸಂಘ ಅಥವಾ ಸರ್ಕಾರೇತರ ಸಂಘ ಸಂಸ್ಥೆಗಳ ಮೂಲಕ ಸಮೀಕ್ಷೆ ಕಾರ್ಯವನ್ನು ಕೈಗೊಳ್ಳಬಹುದಾಗಿದೆ.

- ತಾಲ್ಲೂಕು ಪಂಚಾಯಿತಿಯ ಸಹಾಯಕ ನಿರ್ದೇಶಕರು(ಪಂ.ರಾಜ್)ರವರು ಶೇಕಡ ಎರಡರಷ್ಟು ಸಮೀಕ್ಷೆ ಕಾರ್ಯದ ಸ್ಥಳ ಪರಿಶೀಲನೆ ಮಾಡುವುದು.

- ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಾಲಕಾಲಕ್ಕೆ ಸಮೀಕ್ಷೆ ಕಾರ್ಯವನ್ನು ಪರಿಶೀಲಿಸಿ ಅಗತ್ಯ ಮಾರ್ಗದರ್ಶನ ನೀಡುವುದು.
- ಜಿಲ್ಲಾ ಪಂಚಾಯಿತಿಯು ಉಪ ಕಾರ್ಯದರ್ಶಿ(ಅಭಿವೃದ್ಧಿ)ಗಳು ಸಮೀಕ್ಷೆಗೆ ಅಗತ್ಯವಿರುವ ನಿಗಧಿತ ಆಸ್ತಿ ಮತ್ತು ಆಸ್ತಿ ತೆರಿಗೆ ನಮೂನೆಗಳನ್ನು ಗ್ರಾಮ ಪಂಚಾಯಿತಿಗಳಿಗೆ ಸರಬರಾಜು ಮಾಡುವ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವುದು.
- ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಡಾಟಾ ಎಂಟ್ರಿ ಆಪರೇಟರ್ ಮತ್ತು ಕರ ವಸೂಲಿಗಾರರಿಗೆ ಆಸ್ತಿ ಸಮೀಕ್ಷೆ ಮತ್ತು ತೆರಿಗೆ ನಿರ್ಧರಣೆಯ ಬಗ್ಗೆ ಸೂಕ್ತ ತರಬೇತಿ ಕಾರ್ಯಗಾರಗಳನ್ನು ನಡೆಸಿ, ಪ್ರಗತಿ ಪರಿಶೀಲಿಸಿ, ಕಾಲಕಾಲಕ್ಕೆ ಆಯುಕ್ತರು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ ಇವರಿಗೆ ವರದಿ ಸಲ್ಲಿಸುವುದು.

**<u>ತರಬೇತಿ:</u>**

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿ ತೆರಿಗೆಗೆ ಒಳಪಡುವ ಸ್ವತ್ತುಗಳ ಸಮೀಕ್ಷೆ ಸ್ವತ್ತು ದಾಖಲೆಗಳ ಪರಿಶೀಲನೆ ಮತ್ತು ತೆರಿಗೆ ನಿರ್ಧರಣೆಯ ಬಗ್ಗೆ ಕಾರ್ಯನಿರ್ವಾಹಕ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಡಾಟಾ ಎಂಟ್ರಿ ಆಪರೇಟರ್ ಮತ್ತು ಕರ ವಸೂಲಿಗಾರರಿಗೆ ಜಿಲ್ಲಾ ಮಟ್ಟದಲ್ಲಿ ಕಾರ್ಯಾಗಾರಗಳನ್ನು ಏರ್ಪಡಿಸಿ ತರಬೇತಿ ನೀಡುವುದು.

**<u>ಕಾಲಾವಧಿ:</u>**

ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಮೂರು ತಿಂಗಳ ಕಾಲಾವಧಿಯಲ್ಲಿ ಕೃಷಿ ತೆರಿಗೆ ನಿರ್ಧರಣೆಗೆ ಒಳಪಟ್ಟಿರದ ಎಲ್ಲಾ ಭೂಮಿ ಮತ್ತು ಕಟ್ಟಡಗಳ ಮ್ಯಾನ್ಯೂಯಲ್ ಸಮೀಕ್ಷೆ ನಡೆಸಿ ತೆರಿಗೆ ವ್ಯಾಪ್ತಿಗೆ ಒಳಪಡಿಸಿ ಪಂಚತಂತ್ರ 2.0 ತಂತ್ರಾಂಶದಲ್ಲಿ ಅಳವಡಿಸುವುದು.

**<u>ಸಮೀಕ್ಷೆಯ ನಮೂನೆ ಮತ್ತು ಅನುದಾನ:</u>**

ಆಸ್ತಿಗಳ ಭೌತಿಕ(ಮ್ಯಾನ್ಯೂಯಲ್) ಸಮೀಕ್ಷೆಗೆ ಕಡ್ಡಾಯವಾಗಿ ರಾಜ್ಯ, ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿ ಸಂಕೇತ ಸಂಖ್ಯೆಗಳನ್ನೊಳಗೊಂಡ ಯಾಂತ್ರೀಕೃತ ಮುದ್ರಿತ ವಿಶಿಷ್ಟ ಗುರುತಿನ ಸಂಖ್ಯೆ(Unique Id)ಯ ಕ್ರಮ ಸಂಖ್ಯೆಗಳನ್ನು ಹೊಂದಿರುವ ನಮೂನೆಗಳನ್ನು ಮಾತ್ರ ಬಳಸತಕ್ಕದ್ದು.

ಆಸ್ತಿ ಸಮೀಕ್ಷೆ ಕ್ರಮಬದ್ಧತೆಯ ಬಗ್ಗೆ ಖಾತರಿಪಡಿಸಲು ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಹಾಲೋಗ್ರಾಮ್‌ಗಳನ್ನು ನಮೂನೆಗಳಿಗೆ ಕಡ್ಡಾಯವಾಗಿ ಅಳವಡಿಸುವುದು.

ಆಸ್ತಿಗಳ ಭೌತಿಕ(ಮ್ಯಾನ್ಯೂಯಲ್) ಸಮೀಕ್ಷೆಯಲ್ಲಿ ಬಳಸುವ ನಮೂನೆಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರಂತೆ ಜಿಲ್ಲಾ ಪಂಚಾಯಿತಿ ಹಂತದಲ್ಲಿ ಸಂಗ್ರಹಿಸುವುದು. ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ(ಅಭಿವೃದ್ಧಿ) ಇವರು ಈ ಬಗ್ಗೆ ಕ್ರಮವಹಿಸಲು ಜವಾಬ್ದಾರರಾಗಿರುತ್ತಾರೆ.

ಆಸ್ತಿ ಸಮೀಕ್ಷೆಗೆ ಬಳಸುವ ನಮೂನೆಗಳು ಹಾಗೂ ಇತರೆ ವೆಚ್ಚಗಳನ್ನು ಗ್ರಾಮ ಪಂಚಾಯಿತಿಗಳು ತಮ್ಮ ಸ್ವಂತ ನಿಧಿ, 15ನೇ ಹಣಕಾಸು ಅಥವಾ ಉಳಿಕೆ ಇರುವ 14ನೇ ಹಣಕಾಸು ಅನುದಾನಗಳಲ್ಲಿ ಕಡ್ಡಾಯವಾಗಿ ಅಳವಡಿಸಿಕೊಂಡು ಭರಿಸುವುದು. ಸಮೀಕ್ಷೆಯ ಕಾರ್ಯಕ್ಕೆ ಸರ್ಕಾರದಿಂದ ಯಾವುದೇ ಅನುದಾನವನ್ನು ಬಿಡುಗಡೆ ಮಾಡಲಾಗುವುದಿಲ್ಲ.

**ಮೇಲ್ವಿಚಾರಣೆ:**

ರಾಜ್ಯ ಮಟ್ಟದಲ್ಲಿ ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರು ಕಾಲಕಾಲಕ್ಕೆ ಪ್ರಗತಿ ಪರಿಶೀಲನೆ ನಡೆಸುವುದು.

ನಿರ್ದೇಶಕರು(ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು ಇವರು ಸಮೀಕ್ಷೆಗೆ ಒಳಪಟ್ಟ ಆಸ್ತಿಗಳ ವಿವರಗಳನ್ನು ಪಂಚತಂತ್ರ 2.0 ತಂತ್ರಾಂಶದಲ್ಲಿ ಇಂಧೀಕರಿಸುವ ಬಗ್ಗೆ ಪರಿಶೀಲನೆ ನಡೆಸುವುದು.

ಜಿಲ್ಲಾ ಮಟ್ಟದಲ್ಲಿ ಮೇಲೆ ವಿವರಿಸಲಾದ ಮಾರ್ಗಸೂಚಿಗಳನ್ವಯ ಸಮರ್ಪಕವಾಗಿ ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸುವ ಪ್ರಕ್ರಿಯೆಯನ್ನು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲ್ವಿಚಾರಣೆ ಮಾಡುವುದು.

**ನೋಡಲ್ ಅಧಿಕಾರಿಗಳು:**

ರಾಜ್ಯ ಮಟ್ಟದಲ್ಲಿ ನಿರ್ದೇಶಕರು(ಅಭಿವೃದ್ಧಿ), ಅಭಿವೃದ್ಧಿ ಶಾಖೆ, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು ಇವರು ನೋಡಲ್ ಅಧಿಕಾರಿಯಾಗಿರುತ್ತಾರೆ.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿ(ಅಭಿವೃದ್ಧಿ) ಇವರು ನೋಡಲ್ ಅಧಿಕಾರಿಯಾಗಿರುತ್ತಾರೆ.

**ಮಾಹಿತಿ ಅಧಿಕಾರಿ:**

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿ ತೆರಿಗೆಗೆ ಒಳಪಡುವ ಸ್ವತ್ತುಗಳ ಸಮೀಕ್ಷೆ ಮತ್ತು ತೆರಿಗೆ ನಿರ್ಧರಣೆಯ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಶ್ರೀ ಕೆ.ಜಿ. ಜಗದೀಶ್, ಉಪ ನಿರ್ದೇಶಕರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು (ಮೊಬೈಲ್ ಸಂಖ್ಯೆ:9900299000) ಇವರನ್ನು ಸಂಪರ್ಕಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

( ಎಲ್. ಕೆ. ಅತೀಕ್ )
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ
ಬೆಂಗಳೂರು

**ಇವರಿಗೆ,**

1. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಬೆಂಗಳೂರು.
2. ನಿರ್ದೇಶಕರು(ಇ-ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ಎಲ್ಲಾ ಗ್ರಾಮ ಪಂಚಾಯಿತಿಗಳ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿಯನ್ನು,**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ. ರಾಜ್)ಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
2. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್ ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
3. ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿ

| Sl. No | District | Taluka | Number of GPs | Total No of Properties | No of Properties for which property profile is updated in FY:2023-24 | No of Properties for which property profile is updated in FY:2024-25 | No of Properties for which property profile is updated in FY:2023-24 is again updated in FY:2024-25 | Total No of Properties for which property profile is updated | % of Properties for which property profile is updated |
|---|---|---|---|---|---|---|---|---|---|
| 1 | BENGALURU | BENGALURU NORTH | 11 | 101553 | 16863 | 95464 | 15450 | 96877 | 95 |
| 2 | BENGALURU | YELAHANKA | 18 | 118799 | 46580 | 108882 | 43919 | 111543 | 94 |
| 3 | BENGALURU | BENGALURU EAST | 11 | 103694 | 48092 | 95953 | 44191 | 99854 | 96 |
| 4 | BENGALURU | ANEKAL | 28 | 288830 | 141542 | 243287 | 130350 | 254479 | 88 |
| 5 | BENGALURU | BENGALURU SOUTH | 16 | 153711 | 41253 | 142435 | 38393 | 145295 | 95 |
| **Grand Total** | | | **84** | **766587** | **294330** | **686021** | **272303** | **708048** | **92** |